**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣಪ್ಪ ಕಮಕನೂರು ರವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.**

**ಪ್ರಶ್ನೆ:**

ಮೈಸೂರು ತಾಲ್ಲೂಕು ಕಸಬಾ ಹೋಬಳಿ, ಮೈಸೂರು ಗ್ರಾಮದ ಸ.ನಂ:86ರ ವಿಸ್ತೀರ್ಣ 15 ಎಕರೆ 17 ಗುಂಟೆ ಜಮೀನನ್ನು ಮೈಸೂರು ಅಭಿವೃದ್ಧಿ ಪ್ರಾಧಿಕಾರದವರು ಸ್ವಾಧೀನ ಪಡಿಸಿಕೊಂಡಿದ್ದು ಇದಕ್ಕೆ ಅಕ್ರಮ ದಾಖಲೆ ಸೃಷ್ಟಿಸಿಕೊಂಡು ಪರಿಹಾರಕ್ಕಾಗಿ ಅರ್ಜಿ ನೀಡಿರುವುದನ್ನು ಕೂಡಲೇ ತಡೆಹಿಡಿದು ನಿಜವಾರಸುದಾರರಿಗೆ ನಿಯಮಾನುಸಾರ ಪರಿಹಾರ ನೀಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಮೈಸೂರು ತಾಲ್ಲೂಕು, ಕಸಬಾ ಹೋಬಳಿ, ಮೈಸೂರು ಗ್ರಾಮದ ಸ.ನಂ:86ರ 7-03 ಎಕರೆ ಜಮೀನನ್ನು ಪ್ರಾಧಿಕಾರವು ಭೂಸ್ವಾಧೀನಪಡಿಸಿಕೊಂಡು ಜೆ.ಎಸ್ಎಸ್ ವಿದ್ಯಾಸಂಸ್ಥೆಗೆ ಹಸ್ತಾಂತರಿಸಲಾಗಿರುವ ಜಮೀನಿಗೆ 50:50 ರ ಅನುಪಾತದಲ್ಲಿ ಪರಿಹಾರ ನೀಡಬೇಕೆಂದು ಶ್ರೀಮತಿ ಎಂ. ಶಾಂತಮ್ಮ ಎಂಬುವವರು ದಿನಾಂಕ:18.09.2023ರಂದು ಮನವಿ ಸಲ್ಲಿಸಿರುತ್ತಾರೆ.ಅರ್ಜಿದಾರರ ಮನವಿ ಮೇರೆಗೆ ದಿನಾಂಕ:07.10.2023ರಂದು ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು ರವರು ಶ್ರೀಮತಿ ಎಂ.ಶಾಂತಮ್ಮ ಎಂಬುವವರಿಗೆ 81,670 ಚ. ಅಡಿಗಳನ್ನು ಪರಿಹಾರತ್ಮಕವಾಗಿ ಮಂಜೂರು ಮಾಡಿ ಆದೇಶಿಸಿರುತ್ತಾರೆ.

ಸದರಿ ಆದೇಶದಂತೆ ಅರ್ಜಿದಾರರಿಗೆ ವಿಜಯನಗರ 4ನೇ ಹಂತದ ಬಡಾವಣೆಯಲ್ಲಿನ ವಿವಿಧ ಅಳತೆಯ 27 ನಿವೇಶನಗಳ ಮಂಜೂರಾತಿ ಪತ್ರವನ್ನು ದಿನಾಂಕ:10.10.2023 ರಂದು ನೀಡಲಾಗಿದ್ದು, ಸದರಿ ನಿವೇಶನಗಳಿಗೆ ಕ್ರಯ ಪತ್ರವನ್ನು ನೀಡಿರುವುದಿಲ್ಲ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯ ಸಂಬಂಧ ತನಿಖೆಗಾಗಿ ಜಾರಿ ನಿರ್ದೇಶನಾಲಯ, ಬೆಂಗಳೂರು ರವರು ತಪಾಸಣೆ ಕೈಗೊಂಡ ಸಂದರ್ಭದಲ್ಲಿ ಸದರಿ ಪ್ರಕರಣಕ್ಕೆ ಸಂಬಂಧಿಸಿದ ಕಡತವನ್ನು ವಶಪಡಿಸಿಕೊಂಡಿರುತ್ತಾರೆ.

ಮೈಸೂರು ನಗರಾಭಿವೃದ್ಧಿ ಪಾಧಿಕಾರದಲ್ಲಿ ನಿವೇಶನ ಹಂಚಿಕೆಯ ಸಂಬಂಧ ನಡೆದಿದೆ ಎನ್ನಲಾದ ಅಕ್ರಮದ ಬಗ್ಗೆ ವಿಚಾರಣೆ ನಡೆಸಲು ಸರ್ಕಾರದ ಅಧಿಸೂಚನೆ ಸಂಖ್ಯೆ:ಹೆಚ್‌ಡಿ 87 ಪಿಸಿಇ 2024, ದಿನಾಂಕ:14.07.2024 ರನ್ವಯ ಮಾನ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಾದ ಶ್ರೀ ಪಿ.ಎನ್ ದೇಸಾಯಿ ರವರ ನೇತೃತ್ವದಲ್ಲಿ ಏಕ ಸದಸ್ಯ ವಿಚಾರಣಾ ಆಯೋಗ ರಚಿಸಿದ್ದು, ಪ್ರಸ್ತುತ ವಿಚಾರಣೆ ಹಂತದಲ್ಲಿರುತ್ತದೆ, ಈ ಪ್ರಕರಣವು ಸಹ ವಿಚಾರಣೆಯ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಅದುದರಿಂದ ಮಾನ್ಯ ಆಯೋಗದ ವರದಿ ಬಂದ ನಂತರ ಪರಿಶೀಲಿಸಿ ನಿಯಮಾನುಸಾರ ಕ್ರಮವಹಿಸಲಾಗುವುದು.

ಸಂಖ್ಯೆ :ನಅಇ 126 ಮೈಅಪ್ರಾ 2025(ಇ)

**(ಬಿ.ಎಸ್ ಸುರೇಶ)**

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು